# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ

E-mail : kannadapostnews@gmail.com / ಕನ್ನಡ post

Price: ₹1

Vol.No.02 | Issue. 92 | Pages. 2 | Date: 11-03-2026, WEDNESDAY RNI NO: KARKAN/2024/89601 Kannada Daily

ಸಂಪುಟ : 02 - ಸಂಚಿಕೆ : 92 - ಪುಟಗಳು : 2 11-03-2026 ಬುಧವಾರ Ph: 8762954248 ದರ : ₹1

# ಕಾಮಗಾರಿ ವಿಚಾರದಲ್ಲಿ ರಾಜಕೀಯ ಕಾದಾಟ

## ಶಾಸಕ ಎಚ್.ಕೆ.ಸುರೇಶ್-ಮಾಜಿ ಸಚಿವ ಬಿ.ಶಿವರಾಂ ನಡುವೆ ಜಟಾಪಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು : ಹಾಸನ ಜಿಲ್ಲೆಯ ಬೇಲೂರು ಪಟ್ಟಣದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ವಿಚಾರದಲ್ಲಿ ರಾಜಕೀಯ ಗುದ್ದಾಟ ತೀವ್ರಗೊಂಡಿದ್ದು, ಬೇಲೂರು ಶಾಸಕ ಎಚ್.ಕೆ. ಸುರೇಶ್ ಹಾಗೂ ಮಾಜಿ ಸಚಿವ ಬಿ. ಶಿವರಾಂ ನಡುವೆ ಆರೋಪ-ಪ್ರತ್ಯಾರೋಪಗಳು ಆರಂಭವಾಗಿವೆ. ಈ ಬೆಳವಣಿಗೆ ಸಾರ್ವಜನಿಕರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಶಿಲ್ಪಕಲೆಗಳ ತವರೂರು ಎಂದು ಹೆಸರುವಾಸಿಯಾಗಿರುವ ಬೇಲೂರಿನಲ್ಲಿ ರಸ್ತೆ, ಒಳಚರಂಡಿ ಸೇರಿದಂತೆ ಹಲವು ಮೂಲಸೌಕರ್ಯ ಕಾಮಗಾರಿಗಳು ನಡೆಯುತ್ತಿವೆ. ಆದರೆ ಈ ಕಾಮಗಾರಿಗಳಿಗೆ ವಿನಾಕಾರಣ ಅಡ್ಡಿಪಡಿಸಲಾಗುತ್ತಿದೆ ಎಂದು ಶಾಸಕ ಎಚ್.ಕೆ. ಸುರೇಶ್ ಮಾಜಿ ಸಚಿವ ಬಿ. ಶಿವರಾಂ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ಅಭಿವೃದ್ಧಿ ಕಾಮಗಾರಿಗಳಿಗೆ ಅಡ್ಡಿ ಆರೋಪ

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಅಲ್ಪ ಅಂತರದಲ್ಲಿ ಸೋಲು ಕಂಡ ಕಾಂಗ್ರೆಸ್ ಹಿರಿಯ ಮುಖಂಡ ಹಾಗೂ ಮಾಜಿ ಸಚಿವ ಬಿ. ಶಿವರಾಂ ತಮ್ಮ ಬೆಂಬಲಿಗರ ಮೂಲಕ ಕಾಮಗಾರಿಗಳನ್ನು ತಡೆಯುತ್ತಿದ್ದಾರೆ ಎಂದು ಶಾಸಕ ಸುರೇಶ್ ಆರೋಪಿಸಿದ್ದಾರೆ.

ಬೇಲೂರು ಪುರಸಭೆ ವ್ಯಾಪ್ತಿಯಲ್ಲಿ ರಸ್ತೆ, ಒಳಚರಂಡಿ ಸೇರಿದಂತೆ ಹಲವು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಸುಮಾರು ?12 ಕೋಟಿ 65 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಆದರೆ ರಾಜಕೀಯ ಕಾರಣಗಳಿಂದ ಕೆಲಸಗಳಿಗೆ ಅಡ್ಡಿ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.



### ಸಾರ್ವಜನಿಕರ ಅಸಮಾಧಾನ

ಸ್ಥಳೀಯರ ಪ್ರಕಾರ, ಅಭಿವೃದ್ಧಿ ಕಾಮಗಾರಿಗಳಲ್ಲಿಯೂ ರಾಜಕೀಯ ಮಾಡಲಾಗುತ್ತಿರುವುದು ಬೇಸರಕ್ಕೆ ಕಾರಣವಾಗಿದೆ.

''ಇತಿಹಾಸದಲ್ಲೇ ಮೊದಲ ಬಾರಿಗೆ ಬೇಲೂರಿಗೆ ಇಷ್ಟು ದೊಡ್ಡ ಪ್ರಮಾಣದ ಅನುದಾನ ಬಂದಿದೆ. ಆದರೆ ಇಲ್ಲಸಲ್ಲದ ಕಾರಣಗಳನ್ನು ನೀಡಿ ಕಾಮಗಾರಿಗಳನ್ನು ತಡೆಯಲಾಗುತ್ತಿದೆ,'' ಎಂದು ಕೆಲವು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ಶಾಸಕ ಎಚ್.ಕೆ. ಸುರೇಶ್ ಕಿಡಿ

ಈ ಕುರಿತು ಪ್ರತಿಕ್ರಿಯಿಸಿದ ಶಾಸಕ ಎಚ್.ಕೆ. ಸುರೇಶ್, ''ಒಲ್ಲದ ಗಂಡ ಮೊಸರಿನಲ್ಲಿ ಕಲ್ಲು ಹುಡುಕಿದಂತೆ ಇಲ್ಲಸಲ್ಲದ ಕಾರಣಗಳನ್ನು ಹುಡುಕಿ ಕಾಮಗಾರಿಗಳನ್ನು ತಡೆಯಲಾಗುತ್ತಿದೆ. ಅಭಿವೃದ್ಧಿ ಕೆಲಸ ಮಾಡಿದವರಿಗೆ ವರವಾಗುತ್ತೋ ಅಥವಾ ಅಡ್ಡಿಪಡಿಸಿದವರಿಗೆ ಶಾಪವಾಗುತ್ತೋ ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ,'' ಎಂದು ಮಾಜಿ ಸಚಿವ ಬಿ. ಶಿವರಾಂ ವಿರುದ್ಧ ವಾಗ್ದಾಳಿ ನಡೆಸಿದರು.

### ಪ್ರವಾಸಿ ತಾಣದ ಅಭಿವೃದ್ಧಿಗೆ ಅಡ್ಡಿ?

ವಿಶ್ವಪ್ರಸಿದ್ಧ ಹೊಯ್ಸಳ ಕಾಲದ ಶ್ರೀ ಚನ್ನಕೇಶವಸ್ವಾಮಿ ದೇವಾಲಯ ಇರುವ ಬೇಲೂರು ಪಟ್ಟಣಕ್ಕೆ ಪ್ರತಿದಿನ ದೇಶ-ವಿದೇಶಗಳಿಂದ ನೂರಾರು ಪ್ರವಾಸಿಗರು ಆಗಮಿಸುತ್ತಾರೆ.

ಈ ಹಿನ್ನೆಲೆಯಲ್ಲಿ ಪಟ್ಟಣದ ಅಭಿವೃದ್ಧಿ ಅಗತ್ಯವಾಗಿದ್ದು, ಸಾರ್ವಜನಿಕರು ಮತ್ತು ಜನಪ್ರತಿನಿಧಿಗಳೂ ಅಭಿವೃದ್ಧಿಗೆ ಒತ್ತು ನೀಡಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.



# ವೈಜ್ಞಾನಿಕ ಭೂ ಪರಿಹಾರಕ್ಕೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಲೂರು ತಾಲೂಕಿನ ಪಾಳ್ಯ ಹೋಬಳಿಗೆ ಸೇರಿದ ತಾಳೂರು ಗ್ರಾಮದ ಸನಂ 22/1ರಲ್ಲಿರುವ ತಮ್ಮ ಕೃಷಿ ಜಮೀನನ್ನು ರೈಲ್ವೆ ಇಲಾಖೆ ಭೂಸ್ವಾಧೀನ ಮಾಡಿಕೊಂಡಿದ್ದು, ನೀಡಿರುವ ಪರಿಹಾರ ಹಣ ಬಹಳ ಕಡಿಮೆಯಾಗಿದೆ ಎಂದು ಸ್ಥಳೀಯ ರೈತರು ದೂರಿದ್ದು, ಹೆಚ್ಚುವರಿ ಪರಿಹಾರ ನೀಡಬೇಕು, ಇಲ್ಲದಿದ್ದರೆ ಹೋರಾಟದ ಹಾದಿ ಹಿಡಿಯುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಸನಂ 22/1ರಲ್ಲಿ ಒಟ್ಟು 0.37 ಎಕರೆ ಜಮೀನಿನಲ್ಲಿರುವ ಸುಮಾರು 27 ಗುಂಟೆ ಜಮೀನು ರೈಲ್ವೆ ಇಲಾಖೆ ಕಾಮಗಾರಿಗಾಗಿ ಭೂಸ್ವಾಧೀನ ಮಾಡಲಾಗಿದೆ. ಈ ಜಮೀನಿನಲ್ಲಿ ಸುಮಾರು 380 ಅಡಕೆ ಮರಗಳು, 38 ತೆಂಗಿನ ಮರಗಳು ಹಾಗೂ ಸಾಕಷ್ಟು ಕಾಫಿ ಗಿಡಗಳಿದ್ದು, ಇವೆಲ್ಲವೂ ರೈತರ ಜೀವನಾಧಾರವಾಗಿವೆ.

ಆದರೆ ರೈಲ್ವೆ ಇಲಾಖೆ ಈ ಜಮೀನಿಗೆ ಕೇವಲ 20 ಲಕ್ಷ ಪರಿಹಾರ ಘೋಷಿಸಿದೆ. ಆದರೆ ಮಾರುಕಟ್ಟೆ ಮೌಲ್ಯಕ್ಕೆ ಹೋಲಿಸಿದರೆ ತುಂಬಾ ಕಡಿಮೆ ಎಂದು ರೈತರು ದೂರಿದರು.

ಹಲವು ವರ್ಷಗಳಿಂದ ಇದೇ ಜಮೀನು ನಂಬಿ ಬದುಕುತ್ತಿರುವ ನಮಗೆ ಬೇರೆ ಜಮೀನು ಇಲ್ಲ. ರೈಲ್ವೆ ಇಲಾಖೆ ಕಾಮಗಾರಿಗೆ ಜಮೀನು ಬಿಟ್ಟುಕೊಟ್ಟ ನಂತರ ಕುಟುಂಬದ ಜೀವನೋಪಾಯದ ಮೇಲೂ ಪರಿಣಾಮ ಬಿದ್ದಿದೆ ಎಂದು ಆತಂಕ ವ್ಯಕ್ತಪಡಿಸಿದರು. ಇನ್ನೊಂದೆಡೆ, ಎತ್ತಿನಹೊಳೆ ಯೋಜನೆ ಪುನರ್ವಸತಿ ಯೋಜನೆಯಡಿ ಕೇವಲ 5 ಲಕ್ಷ ನೀಡಲಾಗಿದೆ.

ಇದರಿಂದಾಗಿ ಕುಟುಂಬಕ್ಕೆ ಉಂಟಾಗಿರುವ ನಷ್ಟಕ್ಕೆ ಸಮರ್ಪಕ ಪರಿಹಾರ ಸಿಕ್ಕಿಲ್ಲ ಎಂದು ಅಳಲು ತೋಡಿಕೊಂಡರು.

ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿ ಪರಿಶೀಲಿಸಿ, ರೈತರಿಗೆ ನ್ಯಾಯಸಮ್ಮತವಾಗಿ ಹೆಚ್ಚುವರಿ ಪರಿಹಾರ ನೀಡುವಂತೆ ರೈಲ್ವೆ ಇಲಾಖೆಗೆ ಆದೇಶಿಸಬೇಕು ಎಂದು ಮನವಿ ಮಾಡಿದರು. ಕೃಷಿ ಮತ್ತು ತೋಟಗಾರಿಕೆಗೆ ಸಂಬಂಧಿಸಿದ ಬೆಳೆಗಳ ಮೌಲ್ಯ, ಮರಗಳ ಸಂಖ್ಯೆ ಹಾಗೂ ಜಮೀನಿನ ನಿಜವಾದ ಮೌಲ್ಯ ಪರಿಗಣಿಸಿ ಸಮರ್ಪಕ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಹೋರಾಟದ ದಾರಿ ಹಿಡಿಯಬೇಕಾದ ಪರಿಸ್ಥಿತಿ ಎದುರಾಗಬಹುದು ಎಂದು ಎಚ್ಚರಿಕೆ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಗ್ರಾಮಸ್ಥರಾದ ಮಂಜೇಗೌಡ, ಚಿದಾನಂದ್, ಯೋಗೀಶ್ ಇದ್ದರು.

# ಮಾ.13 ರಿಂದ ಸೀರೆ ಪ್ರದರ್ಶನ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ರವೀಂದ್ರ ನಗರದ ರಾಘವೇಂದ್ರ ಮಠದಲ್ಲಿ ಮಾ.13 ರಿಂದ 17 ವರೆಗೆ ಆಕರ್ಷಕ ಸೀರೆಗಳ ಪ್ರದರ್ಶನ ಮತ್ತು ಮಾರಾಟ ವ್ಯವಸ್ಥೆ ಮಾಡಲಾಗಿದೆ ಎಂದು ಪ್ರದೀಪ್ ಸಿ.ಎ.ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಂಚಿ ಕಾಮಾಕ್ಷಿ ಸಿಲ್ಕ್ ಹಾಗೂ ಕಂಚಿ ಕೋ. ಶ್ರೀ ಅನಘ ಸಿಲ್ಕ್, ಪ್ಯೂರ್ ಮೈಸೂರು ಸಿಲ್ಕ್, ಸೆಮೀ ಕ್ರೇಪ್ ಮೈಸೂರು ಸಿಲ್ಕ್, ಬೆಂಗಳೂರು ಸಿಲ್ಕ್, ಕಾಂಚೀಪುರಂ ಸಿಲ್ಕ್ ಮತ್ತು ಬನಾರಸ್ ಸೀರೆಗಳು ಸೇರಿದಂತೆ ಎಲ್ಲ ತರಹದ ಫ್ಯಾನ್ಸಿ ಸೀರೆಗಳು ರಿಯಾಯ್ತಿ ದರದಲ್ಲಿ ದೊರೆಯಲಿವೆ ಎಂದರು.

ಒಂದು ಸೀರೆ ಖರೀದಿಸಿದರೆ ಮತ್ತೊಂದು ಸೀರೆ ಉಚಿತವಾಗಿ ದೊರೆಯಲಿದ್ದು, ಇದು ಹಾಸನ ನಗರದ ಜನತೆಗೆ ಸುವರ್ಣಾವಕಾಶವಾಗಿದ್ದು, ಎಲ್ಲರೂ ಇದರ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು. ಹೆಚ್ಚಿನ ಮಾಹಿತಿಗಾಗಿ 9972442606/9606467167 ಈ ನಂಬರ್ ಸಂಪರ್ಕಿಸುವಂತೆ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ನವೀನ, ಕುಮಾರ್ ಸಿ.ಪಿ.ಇದ್ದರು.

# ಶ್ರೀ ಶಂಭುನಾಥ ಸ್ವಾಮೀಜಿ ವರ್ಧಂತ್ಯುತ್ಸವ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ನಗರದ ಶ್ರೀ ಆದಿಚುಂಚನಗಿರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜಿನ ವತಿಯಿಂದ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಹಾಸನ ಮತ್ತು ಕೊಡಗು ಜಿಲ್ಲೆಯ ಕಾರ್ಯದರ್ಶಿಗಳಾದ ಪರಮಪೂಜ್ಯ ಶ್ರೀ ಶಂಭುನಾಥ ಸ್ವಾಮೀಜಿ ಅವರ 47ನೇ ವರ್ಷದ ಜನ್ಮದಿನದ ಆಚರಣೆ ನಗರ ಸಮೀಪದ ಜಾಜೂರಿನಲ್ಲಿರುವ ಶ್ರೀ ಸಂಕಟಮೋಚನಾ ಪಾರ್ಶ್ವ ಭೈರವ ಗೋಶಾಲೆಯಲ್ಲಿ ನೆರವೇರಿತು.

ಈ ಅರ್ಥಗರ್ಭಿತ ಆಚರಣೆಯಲ್ಲಿ ಶ್ರೀ ಆದಿಚುಂಚನಗಿರಿ ಪದವಿ ಪೂರ್ವ ಕಾಲೇಜು ಮತ್ತು ಪ್ರೌಢಶಾಲೆಯ ಪ್ರಾಂಶುಪಾಲ ಲಿಂಗರಾಜು ಅವರು, ಶ್ರೀ ಆದಿಚುಂಚನಗಿರಿ ಆಂಗ್ಲಶಾಲೆಯ ಮುಖ್ಯೋಪಾಧ್ಯಾಯಿನಿ ಜ್ಞಾನೇಶ್ವರಿ ಅವರು, ಶಿಕ್ಷಕ ವೃಂದದವರು ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಶ್ರೀ ಶಂಭುನಾಥ ಸ್ವಾಮೀಜಿ ಅವರ ಹುಟ್ಟು ಹಬ್ಬದ ಆಚರಣೆ ಶ್ರೀ ಸಂಕಟಮೋಚನ ಪಾರ್ಶ್ವ ಭೈರವ ಗೋಶಾಲೆಯಲ್ಲಿರುವ ಗೋವುಗಳಿಗೆ ಪೂಜೆ ಸಲ್ಲಿಸಿ, ಅವುಗಳಿಗೆ ಆಹಾರವಾಗಿ ಹಸಿ ಮೇವನ್ನು, ತಾಜಾ ಸೊಪ್ಪು ತರಕಾರಿಗಳನ್ನು ನೀಡುವುದರ ಮೂಲಕ ಅರ್ಥಪೂರ್ಣವಾಗಿ ನಡೆಯಿತು. ಈ ಸಂದರ್ಭದಲ್ಲಿ ಪ್ರಾಂಶುಪಾಲ ಡಾ.ಲಿಂಗರಾಜು ಮಾತನಾಡಿ, ಹುಟ್ಟು ಹಬ್ಬದ ಆಚರಣೆ ಈ ರೀತಿಯಲ್ಲಿ ಪಶು ಪಕ್ಷಿಗಳಿಗೆ ಆಹಾರ ನೀಡುವುದು, ದೀನ ದಲಿತರಿಗೆ ಸಹಕರಿಸುವಂತಹ ಸಮಾಜಮುಖಿ ಕಾರ್ಯಗಳ ಮೂಲಕ ನಡೆಯಬೇಕು ಎಂದು ನುಡಿದರು.

ಈ ಸಮಾರಂಭದಲ್ಲಿ ಭಾಗಿಯಾಗಿದ್ದ ಶ್ರೀ ಆದಿಚುಂಚನಗಿರಿ ಆಂಗ್ಲ ಶಾಲೆಯ ಮುಖ್ಯ ಶಿಕ್ಷಕಿ ಜ್ಞಾನೇಶ್ವರಿ ಮಾತನಾಡಿ, ಶಂಭುನಾಥ ಸ್ವಾಮೀಜಿಯವರು ತಮ್ಮ ಬಾಲ್ಯದಲ್ಲಿಯೇ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿ ಅವರ ಸಾಮಿಪ್ಯದಲ್ಲಿ ಕಾಲ ಕಳೆದ ಅದೃಷ್ಟವಂತರು. ಆದ್ದರಿಂದಲೇ ಸ್ವಾಮೀಜಿಯವರ ಗುಣಗಳ ಕನ್ನಡಿಯಂತೆ ಸಮಾಜ ಸೇವಾ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಮಾಜವನ್ನು ಸನ್ಮಾರ್ಗದಲ್ಲಿ ನಡೆಸುವ ಕೈಂಕರ್ಯವನ್ನು ಸಮುದ್ರದ ತಟದಲ್ಲಿರುವ ದೀಪ ಸ್ತಂಭದಂತೆ ಮಾಡುತ್ತಿದ್ದಾರೆ ಎಂದು ತಿಳಿಸಿದರು.

# ಮಾವನಿಂದ ಹಲ್ಲೆಗೆ ಯತ್ನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲೂಕಿನ ಶಾಂತಿಗ್ರಾಮ ಹೋಬಳಿ ದೊಡ್ಡ ಚಾಕನಹಳ್ಳಿ ಗ್ರಾಮದಲ್ಲಿ ಆಸ್ತಿ ವಿಚಾರ ಸಂಬಂಧ ಕೌಟುಂಬಿಕ ಕಲಹ ಗಂಭೀರ ಸ್ವರೂಪ ಪಡೆದುಕೊಂಡಿದೆ. ಮಾವನೊಬ್ಬ ತನ್ನ ಸ್ವಂತ ಸೊಸೆಯರ ಮೇಲೆಯೇ ಮಚ್ಚು ಹಿಡಿದು ದಾಳಿ ನಡೆಸಲು ಯತ್ನಿಸಿದ್ದಾನೆ. ಗ್ರಾಮದ ನಿವಾಸಿ ಮಾಳಿಗೇಗೌಡ ಎಂಬುವವರೇ ಈ ಕೃತ್ಯಕ್ಕೆ ಮುಂದಾಗಿದ್ದು, ಈ ದೃಶ್ಯಾವಳಿ ಎಲ್ಲೆಡೆ ವೈರಲ್ ಆಗಿದೆ.

ಘಟನೆಯ ವಿವರ: ಕಳೆದ ಕೆಲ ದಿನಗಳಿಂದ ಮಾಳಿಗೇಗೌಡರ ಕುಟುಂಬದಲ್ಲಿ ಆಸ್ತಿ ಹಂಚಿಕೆ ವಿಚಾರವಾಗಿ ಭಿನ್ನಾಭಿಪ್ರಾಯ ಮುಂದುವರಿದಿದ್ದವು. ಇದೇ ವಿಚಾರವಾಗಿ ಸೋಮವಾರ ಕುಟುಂಬ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದಿದ್ದು, ಇದು ತುಸು ವಿಕೋಪಕ್ಕೆ ಹೋಗಿ ತಾಳ್ಮೆ ಕಳೆದುಕೊಂಡ ಮಾಳಿಗೇಗೌಡ, ಮಚ್ಚು ಹಿಡಿದು ಸೊಸೆಯರ ಮೇಲೆ ದಾಳಿ ಮಾಡಲು ಮುಂದಾಗಿದ್ದಾರೆ.

ಮಾವ ಮಚ್ಚು ಹಿಡಿದು ಮುಂದೆ ಬಂದಾಗ ಭಯಭೀತರಾದ ಮಹಿಳೆಯರು, ಪ್ರಾಣಭಯದಲ್ಲಿ ಕಿರುಚುತ್ತಾ ಎದುರಾಗಿ ನಿಂತು ಸಹಾಯಕ್ಕಾಗಿ ಕೂಗಾಡಿದ್ದಾರೆ.

ಗಲಾಟೆ ಶಬ್ದ ಕೇಳಿಬಂದರೂ ಘಟನೆ ನಡೆದ ಜಾಗ ಜಮೀನು ಬಳಿ ಇದ್ದುದರಿಂದ ಹಾಗೂ ಸುತ್ತಮುತ್ತ ಜನರ ಓಡಾಟ ಕಡಿಮೆ ಇದ್ದ ಕಾರಣ ತಕ್ಷಣ ಯಾರೊಬ್ಬರೂ ನೆರವಿಗೆ ಬರಲಿಲ್ಲ ಎನ್ನಲಾಗಿದೆ.

ಅದೃಷ್ಟವಶಾತ್ ಆಸ್ತಿ ಜಗಳ ಮಾತಿನ ಗಲಾಟೆಯಲ್ಲೇ ಕೊನೆಗೊಂಡಿದ್ದು ಯಾವುದೇ ಅನಾಹುತ ಸಂಭವಿಸಿಲ್ಲ.

ಗ್ರಾಮದಲ್ಲಿ ಆತಂಕ: ಮನೆಯ ಹಿರಿಯನೇ ಸೊಸೆಯಂದಿರ ಮೇಲೆಯೇ ಮಾರಕಾಸ್ತ್ರ ಹಿಡಿದು ದಾಳಿ ಮಾಡಲು ಮುಂದಾದ ಘಟನೆ ಗ್ರಾಮದಲ್ಲಿ ಆತಂಕ ಹಾಗೂ ಚರ್ಚೆಗೆ ಕಾರಣವಾಗಿದೆ. ಕುಟುಂಬದ ಒಳಜಗಳವೇ ಇಂತಹ ಹಿಂಸಾತ್ಮಕ ರೂಪ ಪಡೆದುಕೊಂಡಿರುವುದು ಗ್ರಾಮಸ್ಥರಲ್ಲಿ ದಿಗಿಲು ಮೂಡಿಸಿದೆ.

# ಮಾ.16 ರಂದು ಅಹೋರಾತ್ರಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವಂತೆ ಆಗ್ರಹಿಸಿ ಮಾ.16ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅಹೋರಾತ್ರಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ನಿರ್ದೇಶಕ ರವಿಕುಮಾರ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 10 ಸಾವಿರ ಕುಲ ಬಾಂಧವರು ಭಾಗವಹಿಸಲಿದ್ದಾರೆ. ಚಿತ್ರದುರ್ಗದ ಜಗದ್ಗುರು ಡಾ. ಶ್ರೀ ಬಸವ

ಮಾಚಿದೇವ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆಯ ಶ್ರೀ ಕ್ಷೇತ್ರ ಕರಿಂಜೆದ ಶ್ರೀ ಮುಕ್ತಾನಂದ ಸ್ವಾಮೀಜಿ ಆಶೀರ್ವಾದದೊಂದಿಗೆ ಹೋರಾಟ ನಡೆಯಲಿದೆ ಎಂದರು.

ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸಬೇಕೆಂಬ ಬೇಡಿಕೆ ಹಲವು ದಶಕಗಳಿಂದ ಕೇಳಿಬರುತ್ತಿದ್ದರೂ ಯಾವುದೇ ಸರ್ಕಾರಗಳು ಪರಿಗಣಿಸಿಲ್ಲ ಎಂದು ದೂರಿದರು.

ಮಡಿವಾಳ ಸಮುದಾಯ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ರಾಜಕೀಯವಾಗಿ ಹಿಂದುಳಿದಿದ್ದರೂ ಸರಿಯಾದ ಮಾನ್ಯತೆ ದೊರೆಯದೇ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಮೈಸೂರು ಮಹಾರಾಜರ ಕಾಲದಿಂದಲೂ ನಮ್ಮ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸುವ ಕುರಿತು ಚರ್ಚೆ ನಡೆಯುತ್ತಲೇ ಇದೆ. ಅಲ್ಲಿಂದ ಇಲ್ಲಿಯವರೆಗೂ ನಾವು ಹಿಂದುಳಿದವರೇ ಆಗಿದ್ದೇವೆ ಎಂದು ಬೇಸರ ಹೊರ ಹಾಕಿದರು.




2009ರಲ್ಲಿ ಅಂದಿನ ಸಿಎಂ ಬಿ.ಎಸ್. ಯಡಿಯೂರಪ್ಪ ಅವರ ಕಾಲದಲ್ಲಿ ಸಮುದಾಯದ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ ಕುರಿತು ಮೈವಿವಿ ಪ್ರೊ. ಡಾ.ಅನ್ನಪೂರ್ಣ ಅವರಿಂದ 2 ವರ್ಷ ಕಾಲ

ರಾಜ್ಯದ ಸುಮಾರು 28 ಜಿಲ್ಲೆಗಳಿಗೆ ಭೇಟಿ ನೀಡಿ ಸಮಗ್ರ ಅಧ್ಯಯನ ನಡೆಸಿ 2011ರಲ್ಲೇ ಸರ್ಕಾರಕ್ಕೆ ವರದಿ ಸಲ್ಲಿಸಿ, ಮಡಿವಾಳ ಸಮುದಾಯವನ್ನು ಪರಿಶಿಷ್ಟ ಜಾತಿಗೆ ಸೇರಿಸುವಂತೆ ಸ್ಪಷ್ಟ ಶಿಫಾರಸು ಮಾಡಲಾಗಿದೆ ಎಂದರು.

ಆ ವರದಿ ಇಂದಿಗೂ ಜಾರಿಯಾಗಿಲ್ಲ. 2022 ರಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವರಾಗಿದ್ದ ಕೋಟಾ ಶ್ರೀನಿವಾಸ ಪೂಜಾರಿ ಅವರು ಅದೇ ವರದಿಯನ್ನು ಸಚಿವ ಸಂಪುಟದಲ್ಲಿ ಮಂಡಿಸಲು ಸೂಚಿಸಿದ್ದರೂ ಸಾಧ್ಯವಾಗಲಿಲ್ಲ. ವರದಿ ಜಾರಿಗೆ ಆಗ್ರಹಿಸಿ ರಾಜ್ಯದ ವಿವಿಧ ಸಂಘಟನೆ ಒಡಗೂಡಿ ಎಲ್ಲ 224 ಶಾಸಕರನ್ನೂ ಭೇಟಿ ಮಾಡಿ ಮನವಿ ಸಲ್ಲಿಸಿದ್ದೇವೆ. ಅಲ್ಲದೆ 19 ಮಂತ್ರಿಗಳು, 137 ಶಾಸಕರು ಸೇರಿ ಒಟ್ಟು 156 ಶಿಫಾರಸ್ಸು ಪತ್ರ ನೀಡಿದ್ದು, ಮುಖ್ಯಮಂತ್ರಿ, ಮುಖ್ಯ ಕಾರ್ಯದರ್ಶಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವರಿಗೆ ಸಲ್ಲಿಸಲಾಗಿದೆ.

ಇಷ್ಟಾದರೂ ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲ. ಅದಕ್ಕಾಗಿ ಸಮುದಾಯದ ಹಕ್ಕಿಗಾಗಿ ಅಹೋರಾತ್ರಿ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆ, ತಾಲ್ಲೂಕು, ಹೋಬಳಿ ಮಟ್ಟದ ಸಂಘಟನೆಗಳ ಪದಾಧಿಕಾರಿಗಳು, ಮಡಿಕಟ್ಟೆಗಳ ಅಧ್ಯಕ್ಷರು, ಕಾರ್ಯಕರ್ತರು ಹಾಗೂ ಸಮುದಾಯದ ಸರ್ಕಾರಿ ನೌಕರರು, ನಿವೃತ್ತ ನೌಕರರು, ವ್ಯಾಪಾರಿಗಳು ಸೇರಿದಂತೆ ಎಲ್ಲರೂ ಭಾಗಿಯಾಗಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಪತ್ರಿಕಾಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಕುಮಾರ್, ಚಂದ್ರಶೇಖರ್, ಮಲ್ಲೇಶ್, ಜಯಣ್ಣ, ಲೋಹಿತ್, ಸೋಮಣ್ಣ, ರಘು ಇದ್ದರು.

# ಆರೋಗ್ಯ ಉಚಿತ ತಪಾಸಣೆ ಶಿಬಿರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಜಿಲ್ಲಾ ವಕೀಲರ ಸಂಘ ಹಾಸನ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಹಾಸನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಹಾಸನಾಂಬ ಲಯನ್ಸ್ ಕ್ಲಬ್ ಇವರ ಸಂಯುಕ್ತ ಆಶ್ರಯದಲ್ಲಿ ಹಾಸನ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಉಚಿತ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಹಾಗೂ ರಕ್ತದಾನ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ಹೇಮಾವತಿ ಅವರು ಉದ್ಘಾಟಿಸಿ ಮಾತನಾಡಿದರು. ಇಂತಹ ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಸಮಾಜದ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ವಕೀಲರು ಹಾಗೂ ಸಾರ್ವಜನಿಕರಿಗಾಗಿ ಈ ರೀತಿಯ ಶಿಬಿರಗಳನ್ನು ಆಯೋಜಿಸಿರುವುದು ಅತ್ಯಂತ ಶ್ಲಾಘನೀಯ ಕಾರ್ಯವಾಗಿದ್ದು, ಸಮಾಜದ ಎಲ್ಲಾ ವರ್ಗಗಳ ಸಹಕಾರದಿಂದ ಇಂತಹ ಸೇವಾ ಕಾರ್ಯಕ್ರಮಗಳು ಮುಂದುವರಿಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಮಾನ್ಯ 2ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀ ಹಿದಾಯತ್ ಉಲ್ಲಾ ಶರೀಫ್ ಅವರು ಆರೋಗ್ಯವೇ




ನಿಜವಾದ ಶ್ರೀಮಂತಿಕೆ ಎಂದು ತಿಳಿಸಿ, ಪ್ರತಿಯೊಬ್ಬರೂ ದಿನನಿತ್ಯ ಕನಿಷ್ಠ 45 ನಿಮಿಷ ನಡೆಯುವುದರಿಂದ ಆರೋಗ್ಯ ಸುಧಾರಿಸುತ್ತದೆ ಎಂದು ಹೇಳಿದರು.

ನಂತರ ಮಾತನಾಡಿದ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆಯ ಸಭಾಪತಿಗಳಾದ ಹೆಮ್ಮಿಗೆ ಮೋಹನ್ ಎಲ್ಲರೂ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡುವ ಮೂಲಕ ಮಾನವೀಯ ಸೇವೆಯಲ್ಲಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.


ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಕಾರ್ಲೆ ಮೊಗಣ್ಣಗೌಡ ಅವರು ಮಾತನಾಡಿ, ಇಂತಹ ಆರೋಗ್ಯ ತಪಾಸಣಾ ಮತ್ತು ರಕ್ತದಾನ ಶಿಬಿರಗಳು ಸಮಾಜದ ಆರೋಗ್ಯ ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಎಲ್ಲರೂ ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ಅನಿಲ್ ಕುಮಾರ್, ಡಾ.ಶೃತಿ, ಶ್ರೀಮತಿ ಜಿ.ಕೆ.ದ್ರಾಕ್ಷಾಯಿಣಿ, ಡಾ.ತೇಜಸ್ವಿ ಹೆಚ್.ಜೆ ಉಪಸ್ಥಿತರಿದ್ದರು. ಇದೇ ವೇಳೆ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು, ಹಿರಿಯ ಹಾಗೂ ಕಿರಿಯ ನ್ಯಾಯಾಧೀಶರುಗಳು ಹಾಗೂ ಸಿವಿಲ್ ನ್ಯಾಯಾಧೀಶರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ಶಿಬಿರದಲ್ಲಿ ಎಲ್ಲಾ ರೀತಿಯ ವಿವಿಧ ಆರೋಗ್ಯ ಸಮಸ್ಯೆಗಳ ತಪಾಸಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಶಿಬಿರದಲ್ಲಿ ಒಟ್ಟು 300ಕ್ಕೂ ಅಧಿಕ ಜನರು ಭಾಗವಹಿಸಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು. ಇದೇ ವೇಳೆ ನಡೆದ ರಕ್ತದಾನ ಶಿಬಿರದಲ್ಲಿ 26 ಮಂದಿ ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಪದಾಧಿಕಾರಿಗಳು, ರೆಡ್ ಕ್ರಾಸ್ ಸಂಸ್ಥೆಯ ಪದಾಧಿಕಾರಿಗಳು, ಹಾಸನಾಂಬ ಲಯನ್ಸ್ ಕ್ಲಬ್ ಪದಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪದಾಧಿಕಾರಿಗಳು, ನ್ಯಾಯಾಲಯದ ಸಿಬ್ಬಂದಿ ವರ್ಗದವರು ಹಾಗೂ ಇತರರು ಉಪಸ್ಥಿತರಿದ್ದರು.

# ದರಗುಟ್ಟಿ ಮಳೆ ಸುರಿದು-2 12 ರಂದು ಕಾದಂಬರಿ ಬಿಡುಗಡೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೃಷಿ ಬದುಕಿನ ಸಂಕಷ್ಟಗಳು ಮತ್ತು ಭಾವನಾತ್ಮಕ ಕಥಾಹಂದರವನ್ನು ಒಳಗೊಂಡಿರುವ ಲೇಖಕಿ ಮಮತಾಪ್ರಭು ಅವರ "ದರಗುಟ್ಟಿ ಮಳೆ ಸುರಿದು" ಕಾದಂಬರಿಯ ಎರಡನೇ ಭಾಗದ ಬಿಡುಗಡೆ ಸಮಾರಂಭವನ್ನು ಮಾ. 12 ರಂದು ಮಧ್ಯಾಹ್ನ 3.30ಕ್ಕೆ ನಗರದ ಮಲೆನಾಡು ಇಂಜಿನಿಯರಿಂಗ್ ಕಾಲೇಜಿನ ಅಲುಮ್ನಿ ಹಾಲ್ ನಲ್ಲಿ ಆಯೋಜಿಸಲಾಗಿದೆ.

ಪ್ರಗತಿಪರ ಕೃಷಿಕ ಹಾಗೂ ಜಾವಗಲ್ ಮಾಡೆಲ್ ಶಾಲೆಯ ಕಾರ್ಯದರ್ಶಿ ಡಾ. ವಿನಾಯಕ ಸಿಂದಿಗೆರೆ ಕಾದಂಬರಿಯನ್ನು ಲೋಕಾರ್ಪಣೆ ಮಾಡಲಿದ್ದಾರೆ.

ಚಿಕ್ಕಮಗಳೂರಿನ ಸಾಯಿ ಏಂಜಲ್ಸ್ ಕಾಲೇಜಿನ ಕನ್ನಡ ಉಪನ್ಯಾಸಕ ಎನ್.ಬಿ. ಕುಮಾರಸ್ವಾಮಿ ಕೃತಿ ಕುರಿತು ಮಾತನಾಡುವರು.

ಕಾರ್ಯಕ್ರಮದಲ್ಲಿ ME-RIISE Foundation ಸಿಇಓ ಗೀತಾ ಕಿರಣ್ ಹಾಗೂ ಲೇಖಕಿ ಅನು ಚೌಡಿಪುರ ಉಪಸ್ಥಿತರಿರಲಿದ್ದಾರೆ. ಲೇಖಕಿ ಮಮತಾಪ್ರಭು ಅವರು ಇಂಜಿನಿಯರಿಂಗ್ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

# ಪಾಶ್ಚಿಮಾತ್ಯ ದೇಶಗಳಲ್ಲಿ ಲಿಂಗ ಸಮಾನತೆಗೆ ಕಾನೂನು ಬಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪಾಶ್ಚಿಮಾತ್ಯ ರಾಷ್ಟ್ರಗಳಲ್ಲಿ ಮಹಿಳೆಯರು ಪುರುಷರಿಗೆ ಸರಿಸಮಾನವಾದ ಜೀವನವನ್ನು ಸಾಗಿಸುತ್ತಿದ್ದು, ಲಿಂಗ ಸಮಾನತೆಗೆ ಬೆಂಬಲವಾಗಿ ಕಾನೂನುಗಳು ಹಾಗೂ ಸಮಾಜದಲ್ಲಿನ ಅವಕಾಶಗಳು ಇದಕ್ಕೆ ಕಾರಣವಾಗಿವೆ ಎಂದು ಅನಿವಾಸಿ ಭಾರತೀಯ ಕವಯತ್ರಿ ಅನುರಾಧ ಹೇಳಿದರು

ನಗರದ ಮಲೆನಾಡು ಇಂಜಿನಿಯರಿಂಗ್ ಕಾಲೇಜು ಹಳೆಯ ವಿದ್ಯಾರ್ಥಿನಿಯಾದ ಇವರು, ಇಂದು ಕಾಲೇಜಿನ ಅಲ್ಯೂಮಿನಿ ಹಾಲ್‌ನಲ್ಲಿ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ನಮ್ಮಲ್ಲಿ ಮಹಿಳೆಯರು ಜಾಗೃತಿರಾದಲ್ಲಿ ಮಾತ್ರ ಸ್ವಾವಲಂಬನೆ ಜೀವನ ನಡೆಸಬಹುದು.

ಮಹಿಳೆಯರು ಸಮಾನತೆಯಿಂದ ಇರಬೇಕಾದರೆ ಅವರ ಕುಟುಂಬದ ಸಹಕಾರ ಇರಬೇಕು. ಭಾರತದಲ್ಲಿ ಶೇ.80 ರಷ್ಟು ಮಹಿಳೆಯರು ಹಳ್ಳಿಯಲ್ಲಿ ಜೀವನ ನಡೆಸುತ್ತಿದ್ದಾರೆ.



ಮಹಿಳೆಯರಿಗೆ ಇನ್ನೂ ಸರಿಯಾದ ಸ್ವಾತಂತ್ರ್ಯವಿಲ್ಲ, ಕುಟುಂಬದ ನಿರ್ವಹಣೆ, ಮಕ್ಕಳನ್ನು ಸಾಕುವುದು, ಗಂಡ ಹಾಗೂ ಮನೆಯಲ್ಲಿ ಹಿರಿಯರನ್ನು ನೋಡಿಕೊಳ್ಳುವುದರ ಜೊತೆಗೆ ವೃತ್ತಿ ಜೀವನ, ಕೆಲಸ ಕಾರ್ಯಗಳು, ಇವೆಲ್ಲಮೂ ಮಹಿಳೆಯರ ಜವಾಬ್ದಾರಿ.

ಇಷ್ಟೆಲ್ಲಾ ದುಡಿದರೂ ನೆಮ್ಮದಿಯಾಗಿ ಇರುವುದಿಲ್ಲ, ಅಡುಗೆಯಿಂದ ಹಿಡಿದು ಜಮೀನಿನ ಕೆಲಸ ಒಳಗೊಂಡಂತೆ, ಪುರುಷನ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಾಳೆ. ಏಕೆಂದರೆ ನಮ್ಮ ದೇಶದ ಕಟ್ಟು ಪಾಡುಗಳು ಆ ರೀತಿಯಲ್ಲಿ ಅವಲಂಭಿಸಿವೆ ಎಂದರು.

ವಿದ್ಯಾವಂತೆಯಾಗಿ, ಸ್ವಯಂ ಉದ್ಯೋಗ ಮಾಡುವುದು, ಸರ್ಕಾರಿ ಕೆಲಸಕ್ಕೆ ಸೇರಿದಾಗ ಅವಳ ಜೀವನ ಸ್ವಲ್ಪ ಸುಧಾರಿಸಬಹುದು, ರಾಜಕೀಯವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ ಮಹಿಳೆ ಮುಂದುವರಿಯಬೇಕಾಗಿದೆ, ಆಗ ಮಾತ್ರ ಪುರುಷರ ಸಮಾನವಾಗಿ ಸಮಾನತೆಯ ಹಕ್ಕು ಬಾಧ್ಯತೆಗಳು ಸಿಗುತ್ತವೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಎಂಟಿಇಎಸ್ ಅಧ್ಯಕ್ಷ ಅರ್.ಟಿ ದ್ಯಾವೇಗೌಡರು, ಮಾತನಾಡಿ ಮಹಿಳೆಯರಿಗೆ ಸಮಾನತೆಯ ಹಕ್ಕು ಸಿಗಬೇಕು ಆಗ ಮಾತ್ರ ಮಹಿಳಾ ದಿನಾಚರಣೆಗೆ ಗೌರವ ಸಿಕ್ಕಿದಂತಾಗುತ್ತದೆ ಎಂದರು.

ಸರ್ಕಾರ ಇನ್ನೂ ಹೆಚ್ಚಿನ ರೀತಿಯಲ್ಲಿ ಮಹಿಳೆಯರಿಗೆ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು. ಹಿಂದೆ ಇದ್ದಂತ ಪರಿಸ್ಥಿತಿ ಈಗ ಇಲ್ಲಾ ಸ್ವಲ್ಪ ಬದಲಾವಣೆಯಾಗಿದೆ, ವಿದ್ಯಾವಂತರಿದ್ದಾರೆ, ಆನೇಕರು ಅಧಿಕಾರಿಗಳಾಗಿದ್ದಾರೆ, ಉದ್ದೋಗ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿದ್ದ ಸಂಸ್ಥೆ ಪ್ರಧಾನ ಕಾರ್ಯದರ್ಶಿ ಚೌಡುವಳ್ಳಿ ಜಗದೀಶ್ ಮಾತನಾಡಿ, ನೂರಾರು ವರ್ಷಗಳಿಂದ ಪುರುಷ ಪ್ರದಾನ ಸಮಾಜವಾಗಿದೆ. ಮಹಿಳೆಯರಿಗೂ ಸಹ ಸಮಾನತೆಯ ಹಕ್ಕು ಸಿಗಬೇಕು. ಹಾಗೂ ಮಹಿಳೆಯರಿಗೆ ಭದ್ರತೆ ಸಿಗಬೇಕು. ಈಗ ಪ್ರತಿಯೊಂದು ಕ್ಷೇತ್ರದಲ್ಲಿ ಸಮಾನವಾಗಿ ಕರ್ತವ್ಯ ನಿರ್ವಹಿಸುತ್ತಿರುವುದು ಸಂತೋಷ ಎಂದರು.

ಕಾಲೇಜಿನ ಪ್ರಾಂಶುಪಾಲ ಡಾ.ಎಚ್. ಜೆ.ಅಮರೇಂದ್ರ ಮಾತನಾಡಿದರು.

ಕಾರ್ಯಕ್ರಮದ ಸಂಯೋಜಕ ಪ್ರೊ.ಅಮೃತ ಡಿ.ಎಸ್. ಹಾಗೂ ಪ್ರೊ. ಯೋಗಿತಾ ಎಸ್.ಕೆ. ವೇದಿಕೆಯಲ್ಲಿದ್ದರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ಡಾ.ಎ. ಜೆ ಕೃಷ್ಣಯ್ಯ, ಎನ್.ಎಸ್. ಎಸ್ ಅಧಿಕಾರಿ ಡಾ.ವಿಜಯಕುಮಾರ್, ಪ್ರೊ. ಬಿ.ಉಮಾ, ಡಾ. ಗೀತಾ ಕಿರಣ್ ಕಾಲೇಜಿನ ರಿಜಿಸ್ಟ್ರಾರ್ ಕುಮದಾ, ಮಾಧ್ಯಮ ಸಂಯೋಜಕ ಶಿವಕುಮಾರ್, ಕಾಲೇಜಿನ ಮಹಿಳಾ ನೌಕರ ವರ್ಗದವರು ಮಹಿಳಾ ಪ್ರಾಧ್ಯಾಪಕರು , ಸಹಪ್ರಾಧ್ಯಾಪಕರು ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

ಕಾರ್ಯಕ್ರಮದ ನಂತರ ಮಹಿಳೆಯ ಜವಾಬ್ದಾರಿ ಹಾಗೂ ಆರೋಗ್ಯದ ವಿಚಾರಗಳನ್ನು ಅಶ್ರಯ ಕ್ಲಿನಿಕ್‌ನ ಮಾನಸಿಕ ತಜ್ಞ ಡಾ.ನಿರುಪಮಾ ಕಿರಣ್ ಸವಿಸ್ತಾರವಾಗಿ ತಿಳಿಸಿದರು.

# ಖಾಲಿ ಹುದ್ದೆ ಭರ್ತಿಗಾಗಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಹಾಗೂ ರಾಜ್ಯ ಸರ್ಕಾರದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಹಾಗೂ ನೇಮಕಾತಿಯಲ್ಲಿ ನಡೆಯುವ ಭ್ರಷ್ಟಾಚಾರ ತಡೆಗಟ್ಟುವಂತೆ ಆಗ್ರಹಿಸಿ, ಕಳೆದ ಕಳೆದ ನವೆಂಬರ್ ತಿಂಗಳಿಂದ ಫೆಬ್ರವರಿವರೆಗೆ ಎಐಡಿವೈಓ ಸಂಘಟನೆಯು ಹಾಸನದ ಯುವಜನರು, ಉದ್ಯೋಗಾಕಾಂಕ್ಷಿಗಳು ಮತ್ತು ಸಾರ್ವಜನಿಕರಿಂದ ಸಂಗ್ರಹಿಸಿದ ನೂರಾರು ಜನರ ಸಹಿ ಇರುವ ಮನವಿ ಪತ್ರವನ್ನು ಇಂದು ಪ್ರತಿಭಟನೆ ಮೂಲಕ ಜಿಲ್ಲಾಡಳಿತಕ್ಕೆ ಸಲ್ಲಿಸಲಾಯಿತು.

ಈವೇಳೆ ಮಾತನಾಡಿದ ಎಐಡಿವೈಓ ಜಿಲ್ಲಾ ಸಂಚಾಲಕ ಟಿ.ಆರ್. ಸುನಿಲ್, ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆ ಖಾಲಿ ಇದ್ದರೂ ಅದನ್ನು ತುಂಬಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿಲ್ಲ. ಕಳೆದ ಐದಾರು ವರ್ಷಗಳಿಂದ ರಾಜ್ಯದಲ್ಲಿ ಯಾವುದೇ ನೇಮಕಾತಿ ಆಗದಿರುವುದು ಉದ್ಯೋಗಾಕಾಂಕ್ಷಿಗಳಲ್ಲಿ ಆಕ್ರೋಶ ಮಡುಗಟ್ಟಿದೆ ಎಂದರು. ವಿದ್ಯಾರ್ಥಿಗಳು ಪದೇ ಪದೆ ಬೀದಿಗಿಳಿದು ಹೋರಾಟ ನಡೆಸುತ್ತಿದ್ದಾರೆ. ನಿರಂತರ ಹೋರಾಟದ ಪ್ರತಿಫಲವಾಗಿ ಮುಖ್ಯಮಂತ್ರಿಗಳು 56,432 ಹುದ್ದೆ ಭರ್ತಿ ಮಾಡಿಕೊಳ್ಳುವುದಾಗಿ ಘೋಷಣೆ ಮಾಡಿದರು.




ಈವರೆಗೂ ನೇಮಕ ಪ್ರಕ್ರಿಯೆ ಆರಂಭವಾಗಿಲ್ಲ, ಸಂಪುಟದಲ್ಲೂ ಅನುಮೋದನೆ ನೀಡಲಾಗಿದೆ ಎಂದು ಭರವಸೆ ನೀಡಲಾಗಿದೆ. ಕೂಡಲೇ ನೇಮಕಾತಿ ಅಧಿಸೂಚನೆ ಹೊರಡಿಸಬೇಕೆಂದು ಒತ್ತಾಯಿಸಿದರು. ಭ್ರಷ್ಟಾಚಾರ ತಡೆಗಟ್ಟಿ, ನೇಮಕಾತಿಯಲ್ಲಿ ಪಾರದರ್ಶಕತೆ ಕಾಪಾಡಬೇಕು, ನೇಮಕಾತಿಯ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಬೇಕು, ಅರ್ಜಿ ಶುಲ್ಕ ಕಡಿತ ಮಾಡಬೇಕು, ಶಿಕ್ಷಣ ಕ್ಷೇತ್ರದಲ್ಲಿ ಉದ್ಯೋಗ ನಾಶ ಮಾಡುವ ಕೆಪಿಎಸ್ ಮ್ಯಾಗ್ನೆಟ್ ಶಾಲೆ ಯೋಜನೆ ಕೈ ಬಿಡಬೇಕು ಎಂದು ಆಗ್ರಹಿಸಿದರು.

ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ಹೆಸರಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಎಂಬ ಕಾರಣ ನೀಡಿ ಗ್ರಾಮೀಣ ಶಾಲೆಗಳನ್ನು ವಿಲೀನಗೊಳಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. ಇದರಿಂದ ಬಡ ಹಾಗೂ ಹಿಂದುಳಿದ ಕುಟುಂಬಗಳ ಮಕ್ಕಳ ಶಿಕ್ಷಣದ ಹಕ್ಕಿಗೆ ಧಕ್ಕೆ ಉಂಟಾಗುವುದರ ಜೊತೆಗೆ ಶಿಕ್ಷಕರ ಹುದ್ದೆಗಳೂ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಹಾಗಾಗಿ ಕೆಪಿಎಸ್ ಮ್ಯಾಗ್ನೆಟ್ ಶಾಲೆ ನೀತಿ ಕೈಬಿಟ್ಟು ಸರ್ಕಾರಿ ಶಾಲೆ ಬಲಪಡಿಸಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಎ ಐಡಿವೈಓ ಉದ್ಯೋಗ ಆಕಾಂಕ್ಷಿ ಹೋರಾಟ ಸಮಿತಿ ಅಧ್ಯಕ್ಷ ರಘು, ಉಪಾಧ್ಯಕ್ಷರಾದ ರತನ್, ಶರತ್, ಸಂತೋಷ್, ಶಿವಕುಮಾರ್ ನಾಯ್ಕ್ ಹಾಗೂ ಸಮಿತಿ ಸದಸ್ಯರಾದ ಗೌತಮ್, ಯೋಗೇಶ್, ಅರುಣ್, ಆದರ್ಶ್, ಮನೋಜ್, ಶಿವು, ಅಪ್ಪು, ದೀಪು, ಮಂಜು, ಹೇಮಂತ್, ಸಾಗರ್, ಪ್ರಸನ್ನ, ಕಾರ್ತಿಕ್, ಪ್ರಕಾಶ್ ಇದ್ದರು.

# ದೇಶದ ಭದ್ರತೆಯಲ್ಲಿ ಸಿ.ಐ.ಎಸ್.ಎಫ್. ಪಾತ್ರ ಅತ್ಯಂತ ಮಹತ್ವದ್ದು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ದೇಶದ ಪ್ರಮುಖ ಕೈಗಾರಿಕಾ ಸಂಸ್ಥೆಗಳು, ವಿಮಾನ ನಿಲ್ದಾಣಗಳು, ಸಮುದ್ರ ಬಂದರುಗಳು ಹಾಗೂ ರಾಷ್ಟ್ರೀಯ ಮಹತ್ವದ ಸ್ಥಳಗಳ ಭದ್ರತೆಯಲ್ಲಿ ಕೇಂದ್ರ ಕೈಗಾರಿಕಾ ಸುರಕ್ಷತಾ ಪಡೆ (ಸಿ.ಐ.ಎಸ್.ಎಫ್.) ಅತ್ಯಂತ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಡೆಪ್ಯೂಟಿ ಕಮಾಂಡೆಂಟ್ ಹಾಗೂ ಎಂ.ಸಿ.ಎಫ್. ಅಧಿಕಾರಿ ಆಶೀಸ್ ದಾಲಿಯನ್ ಹೇಳಿದರು.

ನಗರದ ಹೊರವಲಯದ ಬೆಂಗಳೂರು ರಸ್ತೆಯ ಕೆಂಚಟ್ಟಹಳ್ಳಿ ಸಮೀಪದ ನಿವೃತ್ತ ಯೋಧರ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಸಿ.ಐ.ಎಸ್.ಎಫ್. 57ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ನಂತರ ಮಾತನಾಡಿದ ಅವರು, ದೇಶದ ಆಂತರಿಕ ಭದ್ರತೆಯನ್ನು ಕಾಪಾಡುವಲ್ಲಿ ಸಿ.ಐ.ಎಸ್.ಎಫ್. ಸಿಬ್ಬಂದಿ ಮಹತ್ವದ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ದೇಶದಾದ್ಯಂತ ಇರುವ ವಿಮಾನ ನಿಲ್ದಾಣಗಳು, ಸಮುದ್ರ ಬಂದರುಗಳು, ಪ್ರಮುಖ ಕೈಗಾರಿಕಾ ಘಟಕಗಳು, ಸಂಸತ್ ಭವನ ಸೇರಿದಂತೆ ಹಲವು ವಿಐಪಿ ಭದ್ರತಾ ವ್ಯವಸ್ಥೆಗಳಲ್ಲಿ ಈ ಪಡೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಹೇಳಿದರು.




ಸಿ.ಐ.ಎಸ್.ಎಫ್. ಪಡೆಯನ್ನು 1969ರಲ್ಲಿ ಆಗಿನ ಪ್ರಧಾನಮಂತ್ರಿ ಇಂದಿರಾ ಗಾಂಧಿಯವರು ಸ್ಥಾಪಿಸಿದರು. ಆರಂಭದಲ್ಲಿ ಕೈಗಾರಿಕಾ ಸಂಸ್ಥೆಗಳ ಭದ್ರತೆಯ ಉದ್ದೇಶದಿಂದ ಸ್ಥಾಪನೆಯಾದ ಈ ಪಡೆ ನಂತರ ದೇಶದ ವಿವಿಧ ಪ್ರಮುಖ ಕ್ಷೇತ್ರಗಳ ಭದ್ರತೆಯನ್ನು ಹೊತ್ತುಕೊಂಡು ಇಂದು ರಾಷ್ಟ್ರದ ಪ್ರಮುಖ ಸುರಕ್ಷತಾ ಪಡೆಯಾಗಿ ಬೆಳೆಯಲಾಗಿದೆ ಎಂದು ಅವರು ತಿಳಿಸಿದರು.

ಇತ್ತೀಚಿನ ವರ್ಷಗಳಲ್ಲಿ ದೇಶದ ಭದ್ರತಾ ವ್ಯವಸ್ಥೆಯಲ್ಲಿ ಸಿ.ಐ.ಎಸ್.ಎಫ್. ಮಹತ್ವ ಹೆಚ್ಚುತ್ತಲೇ ಬಂದಿದೆ. ವಿಮಾನ ನಿಲ್ದಾಣಗಳ ಭದ್ರತೆ, ಬಂದರುಗಳ ಸುರಕ್ಷತೆ, ಪ್ರಮುಖ ವಿದ್ಯುತ್ ಉತ್ಪಾದನಾ ಘಟಕಗಳು, ಅಣುಶಕ್ತಿ ಕೇಂದ್ರಗಳು ಸೇರಿದಂತೆ ಹಲವಾರು ಸೂಕ್ಷ್ಮ ಪ್ರದೇಶಗಳಲ್ಲಿ ಈ ಪಡೆ ತನ್ನ ಸೇವೆಯನ್ನು ಸಲ್ಲಿಸುತ್ತಿದೆ. ಸಾರ್ವಜನಿಕ ಸುರಕ್ಷತೆ ಮತ್ತು ರಾಷ್ಟ್ರೀಯ ಆಸ್ತಿ ರಕ್ಷಣೆ ಎಂಬ ಎರಡು ಪ್ರಮುಖ ಗುರಿಗಳನ್ನು ಹೊಂದಿಕೊಂಡು ಸಿ.ಐ.ಎಸ್.ಎಫ್. ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿಯೂ ಈ ಪಡೆ ಮುಂಚೂಣಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಸುನಾಮಿ ಸೇರಿದಂತೆ ಹಲವು ವಿಪತ್ತುಗಳ ಸಂದರ್ಭಗಳಲ್ಲಿ ರಕ್ಷಣಾ ಕಾರ್ಯಾಚರಣೆಗಳಲ್ಲಿ ಪಾಲ್ಗೊಂಡು ಜನರ ಜೀವ ರಕ್ಷಣೆಗಾಗಿ ಮಹತ್ವದ ಕೊಡುಗೆ ನೀಡಲಾಗಿದೆ. ಸಂಕಷ್ಟದ ಸಂದರ್ಭಗಳಲ್ಲಿ ಜನರಿಗೆ ನೆರವಾಗುವುದು ಕೂಡ ಈ ಪಡೆಯ ಪ್ರಮುಖ ಕರ್ತವ್ಯಗಳಲ್ಲಿ ಒಂದಾಗಿದೆ ಎಂದು ಅವರು ಹೇಳಿದರು. ಮಿಲಿಟರಿ ಪಡೆಗಳು ಯುದ್ಧಕಾಲದಲ್ಲಿ ದೇಶವನ್ನು ರಕ್ಷಿಸುವಲ್ಲಿ ಪ್ರಮುಖ ಪಾತ್ರವಹಿಸಿದರೆ, ಸಿ.ಐ.ಎಸ್.ಎಫ್. ಸೇರಿದಂತೆ ಭದ್ರತಾ ಪಡೆಗಳು ಶಾಂತಿಕಾಲದಲ್ಲಿಯೂ ದೇಶದ ಆಂತರಿಕ ಭದ್ರತೆಯನ್ನು ಕಾಪಾಡುವ ಮಹತ್ವದ ಜವಾಬ್ದಾರಿಯನ್ನು ಹೊತ್ತಿವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ನಿವೃತ್ತ ಯೋಧರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯುವ ಅಗತ್ಯವಿದೆ. ಅವರ ಸೇವೆಯನ್ನು ಸಮಾಜ ಯಾವತ್ತೂ ಮರೆಯಬಾರದು ಎಂದು ಅವರು ಹೇಳಿದರು.

# ವಿಶೇಷ ಉಪನ್ಯಾಸ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಾಣಿಜ್ಯಶಾಸ್ತ್ರ ಅಧ್ಯಯನ ಮಾಡುವ ವಿದ್ಯಾರ್ಥಿಗಳು ಷೇರು ಮಾರುಕಟ್ಟೆಗಳಲ್ಲಿ ಹೂಡಿಕೆ ಮಾಡುವುದರ ಕುರಿತು ಮತ್ತು ಅದರ ಲಾಭ, ನಷ್ಟದ ಬಗ್ಗೆ ಸಂಪೂರ್ಣವಾಗಿ ಅರಿವು ಮೂಡಿಸಿಕೊಂಡರೆ ಆರ್ಥಿಕವಾಗಿ ಸಬಲರಾಗಬಹುದು ಎಂದು ಹೊಳೆನರಸೀಪುರ ಸರ್ಕಾರಿ ಗೃಹ ವಿಜ್ಞಾನ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಎಸ್. ಸುನಿಲ್ ಹೇಳಿದರು.

ನಗರದ ಆರ್.ಸಿ. ರಸ್ತೆ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗದ ವತಿಯಿಂದ ಮಂಗಳವಾರ ನಡೆದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ಯುವಜನತೆಗೆ ಅನೇಕ ಕ್ಷೇತ್ರಗಳಲ್ಲಿ ಬಂಡವಾಳ ಹೂಡಿಕೆ ಮಾಡಿ ಆಧಾಯ ಗಳಿಸುವ ಜೊತೆಗೆ ಉದ್ಯೋಗ ಸೃಷ್ಟಿ ಮಾಡುವ ಅವಕಾಶಗಳು ಇರುತ್ತದೆ. ಅದಕ್ಕೆ ಬೇಕಾದ ಕೌಶಲ್ಯ ಜಾಣ್ಮೆಯ ಅಗತ್ಯತೆ ಇದೆ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಬಂಡವಾಳ ಹೂಡಿಕೆ ಮಡಿ ಮಾರುಕಟ್ಟೆಯಲ್ಲಿ ಲಾಭಗಳಿಸುವ ಜೊತೆಗೆ ಸರ್ಕಾರದ ಮಟ್ಟದಲ್ಲಿ ಸರಿಯಾದ ತೆರಿಗೆ ಕಟ್ಟುವ ಮೂಲಕ ರಾಷ್ಟ್ರೀಯ ಸಂಪತ್ತು ಹೆಚ್ಚಿಸಲು ಸಹಕಾರಿಯಾಗಬೇಕು. ಇಂದು ಎಲ್ಲಾ ಕ್ಷೇತ್ರಗಳಲ್ಲೂ ಪೈಪೋಟಿ ಇದ್ದು, ಸ್ವ ಉದ್ಯೋಗ, ಹಣ ಗಳಿಕೆಗೆ ಸಾಕಷ್ಟು ಒಳ್ಳೆಯ ಮಾರ್ಗಗಳು ಇವೆ. ಕೆಲ ವರ್ಷಗಳ ಹಿಂದಿನಿಂದ ಬಂಡವಾಳ ಹೂಡಿಕೆ ಮಾಡುವ ಯುವಕರ ಸಂಖ್ಯೆ ಹೆಚ್ಚಾಗುತ್ತಿದ್ದು, ಇದರ ಬಗ್ಗೆ ಅಧ್ಯಯನ ಮಾಡಿದರೆ ಹಣಗಳಿಕೆ ಸುಭವಾಗಲಿದೆ. ವಿಶೇಷವಾಗಿ ವಾಣಿಜ್ಯಶಾಸ್ತ್ರ ಅಧ್ಯಯನ ಮಾಡುವ ಯುವಕರು ದೇಶದ ವಿದೇಶಗಳಲ್ಲಿ ನಡೆಯುತ್ತಿರುವ ಷೇರು ಮಾರುಕಟ್ಟೆಗಳ ಬಗ್ಗೆ ತಿಳಿದುಕೊಳ್ಳಬೇಕು. ಪಠ್ಯದ ವಿಷಯನ್ನು ಎಷ್ಟು ಆಸಕ್ತಿಯಿಂದ ಕಲಿಯುತ್ತೇವೊ ಹಾಗೆಯೆ ನಮ್ಮ ಸುತ್ತಮುತ್ತಲಿನ ಆರ್ಥಿಕ ವ್ಯವಹಾರ, ವೈಹಿವಟುಗಳ ಬಗ್ಗೆ ತಿಳಿದುಕೊಂಡರೆ ಆರ್ಥಿಕವಾಗಿ ಸಬಲರಾಗಲು ಸಹಾಯಕವಾಗುತ್ತದೆ ಎಂದರು.



ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ವಾಣಿಜ್ಯಶಾಸ್ತ್ರ ವಿಷಯದಲ್ಲಿ ಅಧ್ಯಯನ ಮಾಡುತ್ತಿರುವ ಯುವಕರಿಗೆ ಇಂದು ಸಮಾಜದಲ್ಲಿ ಅಪಾರವಾದ ಉದ್ಯೋಗಾವಕಾಶಗಳು ಸೃಷ್ಟಿಯಾಗಿವೆ. ಕಾಲೇಜಿನಲ್ಲಿ ಅಧ್ಯಾಪಕರು ಬೋಧಿಸುವ ಪಠ್ಯದೊಂದಿಗೆ ಅವರುಗಳು ನೀಡುವ ಸಾಮಾನ್ಯ ಜ್ಞಾನದ ಬಗ್ಗೆ ಮಾಹಿತಿ ಪಡೆದು ಉದ್ಯೋಗವನ್ನು ಗಿಟ್ಟಿಸಿಕೊಳ್ಳಲು ಬೇಕಾದ ಕೌಶಲ್ಯಗಳನ್ನು ಕಲಿತರೆ ಜೀವನದಲ್ಲಿ ಸಾಧನೆ ಮಾಡಲು ಸಹಕಾರಿಯಾಗಲಿದೆ. ಆಧುನಿಕ ತಂತ್ರಜ್ಞಾನದ ಬಗ್ಗೆ ಹಾಗೂ ಅದರ ಬಳಕೆ ಮಾಡುವುದನ್ನು ಕಲಿಯುವ ಮೂಲಕ ಉದ್ಯೋಗವನ್ನು ಗಟ್ಟಿಸಿಕೊಳ್ಳಬಹುದಾದ ಕೌಶಲ್ಯಗಳ ಕಡೆ ಯುವಕರು ಕ್ರಮ ವಹಿಸಬೇಕಿದೆ ಎಂದು ಹೇಳಿದರು.

ಐ.ಕ್ಯು.ಎ.ಸಿ. ಸಂಚಾಲಕ ಜಿ.ಆರ್. ಮೋಹನ್ ಕುಮಾರ್, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ನಂದನ್ ಪಿ, ಸಹಾಯಕ ಪ್ರಾಧ್ಯಾಪಕಿ ರಮ್ಯ ಡಿ.ಜೆ. ಹಾಗೂ ವಿಭಾಗದ ಉಪನ್ಯಾಸಕರು ಹಾಜರಿದ್ದರು.



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಮಂಗಳವಾರ ನವದೆಹಲಿಯಲ್ಲಿ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ಅವರು ಆಯೋಜಿಸಿದ್ದ ಬೆಳಗಿನ ಉಪಾಹಾರ ಕೂಟದಲ್ಲಿ ಪಾಲ್ಗೊಂಡ ಸಂಸದ ಶ್ರೇಯಸ್ ಪಟೇಲ್, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು.

## ಇತಿಹಾಸದಲ್ಲಿ ಈ ದಿನ

### ಮಾರ್ಚ್-11

ಪೂ 241 ರಲ್ಲಿ ಏಗೇಟ್ಸ್ ದ್ವೀಪಗಳ ಕದನ: ರೋಮನ್ನರು ಕಾರ್ತೇಜ್ ನೌಕಾಪಡೆಯನ್ನು ಮುಳುಗಿಸಿ, ಮೊದಲ ಪ್ಯೂನಿಕ್ ಯುದ್ಧವನ್ನು ಕೊನೆಗೊಳಿಸಿದರು.

1783 ರಲ್ಲಿ, ಕ್ಯಾಪ್ಟನ್ ಬ್ಯಾರಿ ನೇತೃತ್ವದಲ್ಲಿ ಯುಎಸ್‌ಎಸ್ ಅಲೈಯನ್ಸ್, ಕೇಪ್ ಕೆನವೆರಲ್ ಬಳಿ ಅಮೇರಿಕನ್ ಕ್ರಾಂತಿಕಾರಿ ಯುದ್ಧದ ಅಂತಿಮ ನೌಕಾ ಯುದ್ಧವನ್ನು ಹೋರಾಡಿ ಗೆದ್ದಿತು.

1861 ರಲ್ಲಿ ಪಶ್ಚಿಮ ಆಫ್ರಿಕಾದ ರಾಜಕೀಯ ನಾಯಕ ಎಲ್ ಹಡ್ಜ್ ಉಮರ್ ಟಾಲ್ ಸೆಗೌ ನಗರವನ್ನು ವಶಪಡಿಸಿಕೊಂಡರು, ಮಾಲಿಯ ಬಂಬಾರ ಸಾಮ್ರಾಜ್ಯವನ್ನು ನಾಶಪಡಿಸಿದರು.

1920 ರಲ್ಲಿ ಬ್ರಿಟಿಷ್ ಸಂಸತ್ತು ಹೋಮ್ ರೂಲ್ ಕಾಯ್ದೆಯನ್ನು ಅಂಗೀಕರಿಸಿತು, ಐರ್ಲೆಂಡ್ ಅನ್ನು ಎರಡು ಭಾಗಗಳಾಗಿ ವಿಂಗಡಿಸಿತು; ದಕ್ಷಿಣದ ಕೌಂಟಿಗಳು ಇದನ್ನು ತಿರಸ್ಕರಿಸಿದವು, ಅಲ್ಲಿ ಆಂಗ್ಲೋ-ಐರಿಶ್ ಯುದ್ಧವು ಒಂದು ವರ್ಷದವರೆಗೆ ಮುಂದುವರಿಯಿತು.

ಎರಡನೇ ಮಹಾಯುದ್ಧದ ಏಕೈಕ ಮಾರಕ ವಾಯುದಾಳಿ, ಟೋಕಿಯೊದ ಮೇಲೆ ನಡೆದ ಬೆಂಕಿ ಬಾಂಬ್ ದಾಳಿಯ ಪರಿಣಾಮಗಳುಟೋಕಿಯೊದ ಮೇಲೆ ಬಾಂಬ್ ದಾಳಿ

1945: ಎರಡನೇ ಮಹಾಯುದ್ಧದ ಅತ್ಯಂತ ಭೀಕರ ವಾಯುದಾಳಿ , ರಾತ್ರಿಯ ಬಿ-೨೯ ಬಾಂಬ್ ದಾಳಿಯ ನಂತರ ಟೋಕಿಯೊಗೆ ಬೆಂಕಿ ಹಚ್ಚಿತು; ೧ ಲಕ್ಷಕ್ಕೂ ಹೆಚ್ಚು ಜನರು ಸಾವನ್ನಪ್ಪಿದರು, ಹೆಚ್ಚಾಗಿ ನಾಗರಿಕರು.

1952 ರ ಕ್ಯೂಬಾದಲ್ಲಿ ಜನರಲ್ ಫುಲ್ಜೆನ್ಸಿಯೊ ಬಟಿಸ್ಟಾ ನೇತೃತ್ವದಲ್ಲಿ ಮಿಲಿಟರಿ ದಂಗೆ

2000ನೇ ಇಸವಿಯ NASDAQ ಸಂಯೋಜಿತ ಷೇರು ಮಾರುಕಟ್ಟೆ ಸೂಚ್ಯಂಕವು 5132.52 ಕ್ಕೆ ತಲುಪಿತು, ಇದು ಡಾಟ್-ಕಾಮ್ ಉತ್ಕರ್ಷದ ಅಂತ್ಯದ ಆರಂಭವನ್ನು ಸೂಚಿಸುತ್ತದೆ.

# ಮಹಿಳೆಯರು ಎಲ್ಲಾ ರಂಗಗಳಲ್ಲಿ ಛಾಪು ಮೂಡಿಸಿದ್ದಾರೆ

ಹಾಸನ: ಮಹಿಳೆಯರು ಇಂದು ಸಮಾಜದ ಎಲ್ಲಾ ಕ್ಷೇತ್ರಗಳಲ್ಲಿಯೂ ತಮ್ಮ ಸಾಮರ್ಥ್ಯವನ್ನು ತೋರಿಸಿ ಮಹತ್ವದ ಸಾಧನೆ ಮಾಡುತ್ತಿದ್ದಾರೆ ಎಂದು ಕ್ರೇಜಿ ಯೋಗ ಕೇಂದ್ರದ ಯೋಗ ಶಿಕ್ಷಕ ಕಿರಣ್ ಹೇಳಿದರು.

ನಗರದ ವಿನಾಯಕನಗರದಲ್ಲಿರುವ ಕ್ರೇಜಿ ಯೋಗ ಪಾರ್ಕ್‌ನಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಹೋಳಿ ಹಬ್ಬದ ಸಂಭ್ರಮ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಹಿಳೆಯರು ಕುಟುಂಬ ನಿರ್ವಹಣೆಯ ಜೊತೆಗೆ ವೃತ್ತಿ ಜೀವನದಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಹಿಂದಿನ ಕಾಲದಿಗಿಂತ ಇಂದು ಮಹಿಳೆಯರು ಶಿಕ್ಷಣ, ಉದ್ಯೋಗ, ಆಡಳಿತ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದು ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಯನ್ನು ನೀಡುತ್ತಿದ್ದಾರೆ ಎಂದು ಅವರು ಹೇಳಿದರು.

ತಾಯಿ, ಹೆಂಡತಿ, ಮಗಳು, ಸೋಸೆ ಎಂಬಂತೆ ಕುಟುಂಬದ ವಿವಿಧ ಹಂತಗಳಲ್ಲಿ ಮಹಿಳೆಯರು ಮಹತ್ತರ ಜವಾಬ್ದಾರಿಗಳನ್ನು ನಿರ್ವಹಿಸುತ್ತಿದ್ದಾರೆ. ಇದಕ್ಕೆ ಜೊತೆಗೆ ಅಧಿಕಾರಿಗಳಾಗಿ, ನೌಕರರಾಗಿ ಹಾಗೂ ವಿವಿಧ ಸಾಮಾಜಿಕ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸಿ ತಮ್ಮ ಸಾಮರ್ಥ್ಯವನ್ನು ತೋರಿಸುತ್ತಿದ್ದಾರೆ ಎಂದು ಅವರು ತಿಳಿಸಿದರು.

ಮಹಿಳೆಯರ ಸಾಧನೆ ಹಾಗೂ ಅವರ ಕೊಡುಗೆಗಳನ್ನು ಗೌರವಿಸುವ ಉದ್ದೇಶದಿಂದ ಅಂತರರಾಷ್ಟ್ರೀಯ ಮಹಿಳಾ ದಿನವನ್ನು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ ಎಂದು ಹೇಳಿದರು.



ಈ ಸಂದರ್ಭದಲ್ಲಿ ಸುಮಾರು ನೂರಕ್ಕೂ ಹೆಚ್ಚು ಮಹಿಳಾ ಯೋಗಪಟುಗಳು ಹಾಗೂ ಪುರುಷ ಯೋಗಪಟುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಮಹಿಳಾ ದಿನಾಚರಣೆಯ ಅಂಗವಾಗಿ ಯೋಗಾಭ್ಯಾಸ ನಡೆಸಿ ನಂತರ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಭಾಗವಹಿಸಿದವರು ಪರಸ್ಪರ ಬಣ್ಣ ಹಚ್ಚಿಕೊಂಡು ಹಬ್ಬದ ಸಂತಸ ಹಂಚಿಕೊಂಡರು.

ಕಾರ್ಯಕ್ರಮದ ಕೊನೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಫಲಹಾರ ಮತ್ತು ಸಿಹಿ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಕ್ರೇಜಿ ಯೋಗ ಕೇಂದ್ರದ ಸದಸ್ಯರು, ಯೋಗಾಭ್ಯಾಸಿಗಳು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

# ವಾರ್ ಎಫೆಕ್ಟ್ : ಗ್ಯಾಸ್ ಸಿಲಿಂಡರ್ ಖರೀದಿಸಲು ಮುಗಿಬಿದ್ದ ಜನತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಅಮೆರಿಕಾ-ಇಸ್ರೇಲ್ ಹಾಗೂ ಇರಾನ್ ನಡುವಿನ ಉದ್ವಿಗ್ನತೆ ಹಿನ್ನೆಲೆಯಲ್ಲಿ ದೇಶದಲ್ಲಿ ತೈಲ ಸರಬರಾಜಿನ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂಬ ಸುದ್ದಿಗಳು ಹರಿದಾಡುತ್ತಿವೆ. ಈ ಹಿನ್ನಲೆಯಲ್ಲಿ ಹಾಸನ ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಡುಗೆ ಗ್ಯಾಸ್ ಸಿಲಿಂಡರ್ ಖರೀದಿಸಲು ಜನರು ಮುಗಿಬಿದ್ದಿರುವ ಘಟನೆಗಳು ಕಂಡುಬಂದಿವೆ.

ನಗರದ ಹಲವಾರು ಎಲ್‌ಪಿಜಿ ಗ್ಯಾಸ್ ಏಜೆನ್ಸಿಗಳ ಮುಂದೆ ಬೆಳಗ್ಗಿನಿಂದಲೇ ಜನರು ಸಾಲಿನಲ್ಲಿ ನಿಂತು ಸಿಲಿಂಡರ್ ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಕೆಲವರು ಮನೆಯಲ್ಲೇ ಸಿಲಿಂಡರ್ ಇದ್ದರೂ, ಭವಿಷ್ಯದ ಕೊರತೆಯ ಭೀತಿಯಿಂದ ಹೆಚ್ಚುವರಿ ಸಿಲಿಂಡರ್ ಪಡೆಯಲು ಮುಂದಾಗಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

### ಪೂರೈಕೆ ಕಡಿಮೆಯಾಗುವ ಭೀತಿ

ಮಧ್ಯಪ್ರಾಚ್ಯದ ತೈಲ ಉತ್ಪಾದಕ ರಾಷ್ಟ್ರಗಳಲ್ಲಿ ಯುದ್ಧದ ಪರಿಣಾಮ ಕಂಡುಬಂದರೆ ಭಾರತಕ್ಕೆ ಕಚ್ಚಾ ತೈಲ ಮತ್ತು ಎಲ್‌ಪಿಜಿ ಪೂರೈಕೆಯಲ್ಲಿ ತಾತ್ಕಾಲಿಕ ವ್ಯತ್ಯಯ ಉಂಟಾಗಬಹುದು ಎಂಬ ಆತಂಕ ಜನರಲ್ಲಿ ಮೂಡಿದೆ. ಈ ಕಾರಣದಿಂದಾಗಿ ಹಾಸನ ಸೇರಿದಂತೆ ಹಲವೆಡೆ ಗ್ಯಾಸ್ ಬುಕ್ಕಿಂಗ್ ಪ್ರಮಾಣ ಏರಿಕೆಯಾಗಿದೆ ಎಂದು ಏಜೆನ್ಸಿ ಸಿಬ್ಬಂದಿ ತಿಳಿಸಿದ್ದಾರೆ.




### ಅಧಿಕಾರಿಗಳ ಮನವಿ

ಇದಕ್ಕೆ ಸಂಬಂಧಿಸಿದಂತೆ ಗ್ಯಾಸ್ ವಿತರಣೆ ಸಂಸ್ಥೆಗಳು ಹಾಗೂ ಸ್ಥಳೀಯ ಆಡಳಿತ ಅವಶ್ಯಕತೆಗಿಂತ ಹೆಚ್ಚು ಸಿಲಿಂಡರ್ ಖರೀದಿಸಬೇಡಿ ಎಂದು ಸಾರ್ವಜನಿಕರಿಗೆ ಮನವಿ ಮಾಡಿವೆ.

ದೇಶದಲ್ಲಿ ಸದ್ಯಕ್ಕೆ ಎಲ್‌ಪಿಜಿ ಕೊರತೆ ಇಲ್ಲ ಎಂದು ಕೂಡ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

### ಕೃತಕ ಕೊರತೆ ಸೃಷ್ಟಿಸುವ ಆತಂಕ

ಒಮ್ಮೆಲೇ ಹೆಚ್ಚಿನ ಜನರು ಸಿಲಿಂಡರ್ ಖರೀದಿಸಲು ಮುಂದಾದರೆ ಕೃತಕ ಕೊರತೆ ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ ಸಾರ್ವಜನಿಕರು ಅವಶ್ಯಕತೆ ಇದ್ದಾಗ ಮಾತ್ರ ಸಿಲಿಂಡರ್ ಬುಕ್ ಮಾಡಬೇಕು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಕಾಯ್ದೆಗಳನ್ನು ಮಾತ್ರ ಪಾಲನೆ ಜೊತೆಗೆ ಅನುಷ್ಠಾನಕ್ಕೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಪೋಕ್ಸೋ ಪ್ರಕರಣಗಳು ಜಿಲ್ಲೆಯಲ್ಲಿ ಹೆಚ್ಚಾಗುತ್ತಿದ್ದು, ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು ಶಾಲೆ, ಕಾಲೇಜುಗಳಲ್ಲಿ ಪೋಕ್ಸೋ ಕಾಯಿದೆಯ ಬಗ್ಗೆ ಜಾಗೃತಿ ಮೂಡಿಸುವಂತೆ ಪ್ರಧಾನ ಹಾಗೂ ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಹೇಮಾವತಿ ಅಧಿಕಾರಿಗಳಿಗೆ ತಿಳಿಸಿದ್ದಾರೆ.

ನಗರದ ಜಿಲ್ಲಾ ನ್ಯಾಯಾಲಯದಲ್ಲಿ ಇಂದು ಜಿಲ್ಲಾ ಮಟ್ಟದ ಪೋಕ್ಸೋ ಸಮಿತಿಯ ಸಭೆ ನಡೆಸಿ ಮಾತನಾಡಿದ ಅವರು ಖಾಸಗಿ ಶಾಲೆಗಳಲ್ಲಿ ಹೆಚ್ಚಾಗಿ ಬಾಲ್ಯ ವಿವಾಹ ಮತ್ತು ಪೋಕ್ಸೋ ಪ್ರಕರಣಗಳು ಕಂಡುಬರುತ್ತಿವೆ. ಮಕ್ಕಳು ಪ್ರೌಢ ವ್ಯವಸ್ಥೆ ತಲುಪುವ ಮೊದಲೆ ಶಾಲೆಗಳಲ್ಲಿ ಮತ್ತು ಕಾಲೇಜುಗಳಲ್ಲಿ ಜಾಗೃತಿ ಮೂಡಿಸುವ ಕ್ರಮಗಳು ಕೈಗೊಳ್ಳಬೇಕು ಎಂದು ತಿಳಿಸಿದರು.



ಪೋಕ್ಸೋ ಕಾಯಿದೆ ಅಡಿಯಲ್ಲಿ ಬರುವ ಕಾನೂನುಗಳ ಬಗ್ಗೆ, ಸಹಾಯವಾಣಿಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳ ಹೆಚ್ಚಾಗಿ ಆಯೋಜನೆ ಮಾಡಬೇಕು ಎಂದರು.

ಪೋಕ್ಸೋ ಕಾಯಿದೆ ದೌರ್ಜನ್ಯಕ್ಕೆ ಒಳಗಾದ ಮಕ್ಕಳು ಮಾನಸಿಕ ಖಿನ್ನತೆ ಒಳಗಾದದಂತೆ ಎಚ್ಚರವಹಿಸಬೇಕು, ಪೊಲೀಸ್ ಅಧಿಕಾರಿಗಳು ಪೋಕ್ಸೋ ಕಾಯಿದೆಯಡಿ ದೂರು ಸಲ್ಲಿಕೆಯಾದರೆ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು ಹಾಗೂ ರಕ್ಷಣೆಯನ್ನು ನೀಡಬೇಕು ಎಂದು ತಿಳಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248